# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1143 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16-12-2025 |
| ಉತ್ತರಿಸುವ ಸಚಿವರು | : | ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ನಗರಗಳಲ್ಲಿ ದಿನನಿತ್ಯದ ಘನತ್ಯಾಜ್ಯದ ಪ್ರಮಾಣವೆಷ್ಟು; ಇದನ್ನು ವಿಲೇವಾರಿ ಮಾಡುವ ಪ್ರಕ್ರಿಯೆ ಹೇಗೆ ನಡೆಯುತ್ತದೆ; | • ಪ್ರಸ್ತುತ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ (ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹೊರತುಪಡಿಸಿ) ಪ್ರತಿದಿನ 7389 ಟನ್ ತ್ಯಾಜ್ಯ ಉತ್ಪಾದನೆಯಾಗುತ್ತಿದೆ. ಸ್ವಚ್ಛ ಭಾರತ ಮಿಷನ್ (ನಗರ) ಯೋಜನೆಯಡಿಯಲ್ಲಿ ತ್ಯಾಜ್ಯ ಸಂಗ್ರಹಣೆಗೆ ಅಗತ್ಯವಿರುವ ವಾಹನ-ಯಂತ್ರೋಪಕರಣಗಳನ್ನು ನಗರ ಸ್ಥಳೀಯ ಸಂಸ್ಥೆಗಳು ಖರೀದಿಸಿದೆ ಮತ್ತು ತ್ಯಾಜ್ಯ ಸಂಸ್ಕರಣೆ ಮತ್ತು ವಿಲೇವಾರಿಗಾಗಿ ಅಗತ್ಯವಿರುವ ಮೂಲಸೌಕರ್ಯಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸುತ್ತಿವೆ.<br>• ನಗರ ಪ್ರದೇಶಗಳಲ್ಲಿ ಸಂಗ್ರಹವಾಗುವ ತ್ಯಾಜ್ಯವನ್ನು ಮೂಲದಲ್ಲಿ ಬೇರ್ಪಡಿಸಿ, ಹಸಿತ್ಯಾಜ್ಯವನ್ನು Windrow Compost, Vermi Compost ತಂತ್ರಜ್ಞಾನದ ಮೂಲಕ ಸಂಸ್ಕರಿಸಿ ಗೊಬ್ಬರ ಉತ್ಪಾದಿಸಲಾಗುತ್ತಿದೆ.<br>• ಒಣತ್ಯಾಜ್ಯವನ್ನು ಪ್ರತ್ಯೇಕವಾಗಿ ಸಂಗ್ರಹಿಸಿ, ಪುನರ್ಬಳಕೆಯಾಗುವ ತ್ಯಾಜ್ಯ (recyclables), ಪುನರ್ಬಳಕೆಯಾಗದ ತ್ಯಾಜ್ಯ (non recyclables) ಮತ್ತು ನಿಸ್ಸತ್ವ ತ್ಯಾಜ್ಯ (inert) ಆಗಿ ವಿಂಗಡಿಸಲಾಗುತ್ತಿದೆ.<br>• Recyclables ತ್ಯಾಜ್ಯವನ್ನು ಪುನರ್ಬಳಕೆದಾರರಿಗೆ ಮಾರಾಟ ಮಾಡಿ, non-recyclables ತ್ಯಾಜ್ಯವನ್ನು ಪರ್ಯಾಯ ಇಂದನವಾಗಿ (RDF) ಬಳಸಲು ಸಿಮೆಂಟ್ ಕಾರ್ಖಾನೆಗೆ ರವಾನಿಸಲಾಗುತ್ತಿದೆ. ನಿಸ್ಸತ್ವ ತ್ಯಾಜ್ಯವನ್ನು ಸ್ಯಾನಿಟರಿ ನೆಲಭರ್ತಿ ಸೌಲಭ್ಯದಲ್ಲಿ ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಗುತ್ತಿದೆ.<br>• ಪ್ರಸ್ತುತ ನಗರಗಳಲ್ಲಿ ಸಂಗ್ರಹವಾಗುತ್ತಿರುವ 3988 TPD ಹಸಿತ್ಯಾಜ್ಯದಲ್ಲಿ ಸುಮಾರು 3650 TPDಯಷ್ಟು ತ್ಯಾಜ್ಯ ಸಂಸ್ಕರಣೆಯಾಗುತ್ತಿದೆ ಮತ್ತು 2651 TPD ಒಣತ್ಯಾಜ್ಯದಲ್ಲಿ 1780 TPD ಯಷ್ಟು ತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದೆ. |

| | | |
|---|---|---|
| ಆ) | ವಿಲೇವಾರಿ ಮಾಡುವಾಗ ಘನತ್ಯಾಜ್ಯವನ್ನು ಹಾಕಲು ಹೇಗೆ ಸ್ಥಳಗಳನ್ನು ನಿಗಧಿ ಪಡಿಸಲಾಗುತ್ತದೆ; | • ಘನತ್ಯಾಜ್ಯ ಸಂಸ್ಕರಣೆ / ಲ್ಯಾಂಡ್‌ಫಿಲ್ ಜಾಗವನ್ನು ಆಯ್ಕೆ ಮಾಡುವಾಗ Solid Waste Management Rules, 2016ರ ಶೆಡ್ಯೂಲ್–I ರಲ್ಲಿರುವ ಮಾನದಂಡಗಳನ್ನು ಅನುಸರಿಸಲಾಗುತ್ತದೆ. ಅದರ ಉದ್ಧೃತ ಭಾಗ ಈ ಕೆಳಕಂಡಂತಿದೆ.<br><br>"The landfill site shall be 100 meter away from river, 200 meter from a pond, 200 meter from Highways, Habitations, Public Parks and water supply wells and 20 km away from Airports or Airbase. However in a special case, landfill site may be set up within a distance of 10 and 20 km away from the Airport/Airbase after obtaining no objection certificate from the civil aviation authority/ Air force as the case may be. The Landfill site shall not be permitted within the flood plains as recorded for the last 100 years, zone of coastal regulation, wetland, Critical habitat areas, sensitive eco-fragile areas." |
| ಇ) | ರಾಜ್ಯ ಘನತ್ಯಾಜ್ಯ ವಿಲೇವಾರಿಗಾಗಿ ನೇಮಕ ಮಾಡಿದ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | • ಘನತ್ಯಾಜ್ಯ ನಿರ್ವಹಣೆ ಕೆಲಸಗಳಲ್ಲಿ ಪೌರಕಾರ್ಮಿಕರು ಮತ್ತು ಪೌರಕಾರ್ಮಿಕೇತರ ಸಿಬ್ಬಂದಿಗಳು (ಲೋಡರ್ಸ್, ಕ್ಲೀನರ್ಸ್, ಚಾಲಕರು, ಆಪರೇಟರ್‌ಗಳು) ಒಳಗೊಂಡಿರುತ್ತಾರೆ.<br>• ರಾಜ್ಯದಲ್ಲಿ ಒಟ್ಟು 25,866 ಪೌರಕಾರ್ಮಿಕರ ಹುದ್ದೆಗಳು (ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹೊರತುಪಡಿಸಿ) ಮಂಜೂರಾಗಿದ್ದು, ಪ್ರಸ್ತುತ 19,427 ಪೌರಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದು, 6439 ಹುದ್ದೆಗಳು ಖಾಲಿ ಇರುತ್ತದೆ.<br>• ನಗರ ಸ್ಥಳೀಯ ಸಂಸ್ಥೆಗಳಲ್ಲಿ ತ್ಯಾಜ್ಯ ಸಂಗ್ರಹಣೆ ಮತ್ತು ಸಾಗಾಣಿಕೆಗೆ ಬಳಕೆಯಲ್ಲಿರುವ ವಾಹನಗಳು ಮತ್ತು ಸಂಸ್ಕರಣೆಗೆ ಬಳಸಲಾದ ಯಂತ್ರೋಪಕರಣಗಳಿಗೆ ಅಗತ್ಯವಿರುವ ಪೌರಕಾರ್ಮಿಕೇತರ ಸಿಬ್ಬಂದಿಗಳನ್ನು ಜಿಲ್ಲಾ ಮಟ್ಟದಲ್ಲಿ ಪರಿಶೀಲಿಸಿ, ಅನುಮೋದನೆ ಪಡೆದು ಹೊರಗುತ್ತಿಗೆ ಮೂಲಕ ಪಡೆಯಲು ಸರ್ಕಾರದ ಆದೇಶ ಸಂಖ್ಯೆ: ನಅಇ 225 ಸಿಎಸ್‌ಎಸ್ 2019, ದಿನಾಂಕ: 22-08-2019ರಲ್ಲಿ ತಿಳಿಸಲಾಗಿದೆ. ಅದರ ರೀತ್ಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪೌರಕಾರ್ಮಿಕೇತರ ಸಿಬ್ಬಂದಿಗಳ ಪಡೆದು ತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದೆ. |
| ಈ) | ಘನತ್ಯಾಜ್ಯ ವಿಲೇವಾರಿಯ ಕುರಿತು ಬಹಳಷ್ಟು ದೂರುಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು? | • ಹೌದು. ತ್ಯಾಜ್ಯ ವಿಲೇವಾರಿ ಜಾಗದಲ್ಲಿ ಬಹಳ ವರ್ಷಗಳಿಂದ ಶೇಖರಣೆಯಾದ ತ್ಯಾಜ್ಯದಲ್ಲಿ ಬೆಂಕಿ ಅನಾಹುತ, ಲೀಚೆಟ್‌ನಿಂದ ದುರ್ವಾಸನೆ, ಇತ್ಯಾದಿ ಕುರಿತಾಗಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ದೂರುಗಳು ಬಂದಿರುತ್ತವೆ. ಇವುಗಳನ್ನು ನಿವಾರಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗುತ್ತಿದೆ.<br>• ನಗರದ ತ್ಯಾಜ್ಯ ಸಂಸ್ಕರಣೆ ಪ್ರದೇಶದಲ್ಲಿ ಬಹಳ ವರ್ಷಗಳಿಂದ ಶೇಖರಣೆಯಾದ ಪಾರಂಪರಿಕ ತ್ಯಾಜ್ಯವನ್ನು ತೆರವುಗೊಳಿಸಿ Bioremediation ಮಾಡಲು ಕ್ರಮ ವಹಿಸಿದೆ. ಜೊತೆಗೆ ದಿನನಿತ್ಯ |

| | | |
|---|---|---|
| | | ಸಂಗ್ರಹವಾಗುವ ತ್ಯಾಜ್ಯವನ್ನು ಪಾರಂಪರಿಕ ತ್ಯಾಜ್ಯದೊಂದಿಗೆ ಮಿಶ್ರಣ ಮಾಡದೆ ಹಸಿ ಮತ್ತು ಒಣತ್ಯಾಜ್ಯವನ್ನು ಪ್ರತ್ಯೇಕವಾಗಿ ಸಂಸ್ಕರಣೆ ಮಾಡಲು ನಗರ ಸ್ಥಳೀಯ ಸಂಸ್ಥೆಗಳಿಗೆ ತಿಳಿಸಿದೆ.<br>• ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇದಕ್ಕಾಗಿ ಅಗತ್ಯವಿರುವ Windrow Compost ಘಟಕ, MRF ಘಟಕಗಳು ಇತ್ಯಾದಿ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸಲು ಮತ್ತು ಪಾರಂಪರಿಕ ತ್ಯಾಜ್ಯವನ್ನು Bioremediation ಮೂಲಕ ನಿರ್ವಹಣೆ ಮಾಡಲು ಸ್ವಚ್ಛ ಭಾರತ ಮಿಷನ್ (ನಗರ) ಯೋಜನೆಯಡಿ ವಿಸ್ತೃತ ಯೋಜನಾ ವರದಿಗಳನ್ನು ಸಿದ್ದಪಡಿಸಿ, ರಾಜ್ಯ ಉನ್ನತಾಧಿಕಾರಯುಕ್ತ ಸಮಿತಿ ಅನುಮೋದನೆಯನ್ನು ಪಡೆಯಲಾಗಿರುತ್ತದೆ. ಸದರಿ ಯೋಜನೆಯಡಿ ನಗರ ಸ್ಥಳೀಯ ಸಂಸ್ಥೆಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ಒದಗಿಸಲಾಗುತ್ತಿದೆ.<br>• ಘನತ್ಯಾಜ್ಯ ನಿರ್ವಹಣೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳು ಸಾಧಿಸುವ ಪ್ರಗತಿಯನ್ನು ರಾಜ್ಯಮಟ್ಟದಲ್ಲಿ ನಿಯಮಿತವಾಗಿ ಪರಿಶೀಲಿಸಲಾಗುತ್ತಿದೆ. |

(ಕಡತ ಸಂಖ್ಯೆ: ನಅಇ 268 ಸಿಎಸ್‌ಎಸ್ 2025)

**(ರಹೀಂ ಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು